ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ



**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ತುಮಕೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿ ಕುರಿತು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

445 (543) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಆಶ್ರಯದಲ್ಲಿ ಎಷ್ಟು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಉತ್ತಮ ವ್ಯಾಸಂಗದ ಹಿತದೃಷ್ಟಿಯಿಂದ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ ನಿಲಯಗಳೆಷ್ಟು ; ಈ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ಎಷ್ಟು ಅನುದಾನವನ್ನು ಪ್ರಸ್ತುತ ವರ್ಷದಲ್ಲಿ ಒದಗಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)